O.S.No.: 79/2009
P.W.:1

ಈ ದಿನ ದಿಃ 09.01.2020 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ವಿ ಎನ್ ಡಿ ವಕೀಲರಿಂದಃ

ನನ್ನ ತಂದೆಯ ಹೆಸರು ಕೆಂಪಯ್ಯ, ತಾಯಿಯ ಹೆಸರು ಪುಟ್ಟಮ್ಮ. ಸದರಿಯವರಿಗೆ ಇಬ್ಬರು ಮಕ್ಕಳು ಅವರುಗಳೆಂದರೆ ಅಮಯ್ಯಮ್ಮ ಮತ್ತು ತಿಮ್ಮಕ್ಕ. ನನ್ನ ವಾಸ ಟಿ.ಹೊಸಹಳ್ಳಿ ಗ್ರಾಮ. ಈ ದಾವೆಯನ್ನು ನಾನು ದಾಸೇಗೌಡ ಮತ್ತು ಮುನಿರಾಜು ರವರ ವಿರುದ್ದ ಹಾಕಿರುತ್ತೇನೆ. ಸದರಿಯವರು ನನ್ನ ಅಕ್ಕನ ಮಕ್ಕಳು. ದಾವಾ ಆಸ್ತಿಯ ಸರ್ವೆ ನಂ.243, 4 ಎಕರೆ 14 ಗುಂಟೆ ಇರುತ್ತದೆ. ದಾವಾ ಆಸ್ತಿಯು ಮೂಲತಃ ನನ್ನ ತಂದೆಗೆ ಸೇರಿದ್ದು. ದಾವಾ ಆಸ್ತಿಯು ನನ್ನ ತಂದೆಯವರಿಗೆ ಸೇರಿರಲಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯು ನನ್ನ ತಾಯಿಯ (1 ನೇ ಪ್ರತಿವಾದಿ) ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ. ನನ್ನತಂದೆ ತೀರಿಕೊಂಡ ನಂತರ ದಾವಾ ಆಸ್ತಿಯು ನನ್ನ ತಾಯಿಗೆ ಸರ್ಕಾರದಿಂದ ಅನುದಾನ ಆಗಿರುತ್ತದೆಂದರೆ ಸರಿ. ಹಾಗಾಗಿ ದಾವಾ ಆಸ್ತಿಯು ನನ್ನ ತಾಯಿಯ ಸ್ವಯಾರ್ಜಿತ ಆಸ್ತಿ ಎಂದರೆ ಸರಿಯಲ್ಲ.

ನನ್ನತಂದೆ ಯಾವಾಗ ತೀರಿಕೊಂಡರು ಎಂದು ನನಗೆ ಗೊತ್ತಿಲ್ಲ. ನನ್ನ ತಂದೆ ತೀರಿಕೊಂಡಾಗ ನನಗೆ ಎಷ್ಟು ವಯಸ್ಸಾಗಿತ್ತು ಎಂದು ನನಗೆ ಗೊತ್ತಿಲ್ಲ. ನನ್ನ ತಂದೆ ತೀರಿಕೊಂಡ ನಂತರ ನನ್ನ ಮತ್ತು ನನ್ನ ಅಕ್ಕನ ಮದುವೆ ಕಾರ್ಯವನ್ನು ನನ್ನ ತಾಯಿಯವರು ಮಾಡಿರುತ್ತಾರೆಂದರೆ ಸರಿ. ನನ್ನ ಅಕ್ಕನ ಮದುವೆ ಯಾವಾಗ ಆಗಿರುತ್ತದೆಂದು ನನಗೆ ಗೊತ್ತಿಲ್ಲ. ನನ್ನ ಅಕ್ಕನ ಮದುವೆ ಮರಿಯಪ್ಪನ ಜೊತೆ ಆಗಿರುತ್ತದೆ. ದಾವಾ ಆಸ್ತಿಯನ್ನು ನನ್ನ ತಾಯಿಯು ಸದರಿ ಮರಿಯಪ್ಪನವರ ಹೆಸರಿಗೆ ವರ್ಗಾವಣೆ ಮಾಡಿದ್ದರು ಎಂದರೆ ನನಗೆ ಗೊತ್ತಿಲ್ಲ. ನನ್ನ ಮದುವೆಯನ್ನು ಮಾಡುವಾಗ ನನ್ನ ತಾಯಿಗೆ ಹಣದ ತೊಂದರೆ ಬಂದ ಕಾರಣ ದಾವಾ ಆಸ್ತಿಯನ್ನು ನನ್ನ ತಾಯಿಯು 2 ಮತ್ತು 3 ನೇ ಪ್ರತಿವಾದಿಯರ ತಂದೆಗೆ ವರ್ಗಾವಣೆ ಮಾಡಿರುತ್ತಾರೆಂದರೆ ಸರಿಯಲ್ಲ. ನಂತರ ಸದರಿಯವರು 2 ಮತ್ತು 3 ನೇ ಪ್ರತಿವಾದಿಯರಿಗೆ ದಾವಾ ಆಸ್ತಿಯನ್ನು ಹಂಚಿ ವಿಭಾಗ ಮಾಡಿಕೊಟ್ಟಿರುತ್ತಾರೆಂದರೆ ಸರಿಯಲ್ಲ. ಹಾಗಾಗಿ 2 ಮತ್ತು 3 ನೇ ಪ್ರತಿವಾದಿಯರಿಗೆ ದಾವಾ ಆಸ್ತಿಯು ಸೇರಬೇಕು ಎಂದರೆ ಸರಿಯಲ್ಲ. ದಾವಾ ಆಸ್ತಿಯು ನನ್ನ ತಾಯಿಯ ಸ್ವಯಾರ್ಜಿತ ಆಸ್ತಿ ಎಂದು ನನಗೆ ತಿಳಿದಿದ್ದರೂ ಸಹ, ಅದನ್ನು ಲಪಾಟಯಿಸಲು ನಾನು ಈ ಸುಳ್ಳು ದಾವೆಯನ್ನು

ಹಾಕಿರುತ್ತೇನೆಂದರೆ ಸರಿಯಲ್ಲ.

ದಾವಾ ಆಸ್ತಿಯಲ್ಲಿ ಅರ್ಧ ಭಾಗದಲ್ಲಿ ನಾನು ಬೆಳೆಯನ್ನು ಬೆಳೆಯುತ್ತಿದ್ದು, 2 ಮತ್ತು 3 ನೇ ಪ್ರತಿವಾದಿಯರು ಇನ್ನರ್ಧ ಭಾಗದಲ್ಲಿ ಬೆಳೆಯನ್ನು ಬೆಳೆಯುತ್ತಿದ್ದಾರೆ. ದಾವಾ ಆಸ್ತಿಯ ಸ್ವಾಧೀನದಲ್ಲಿ ನಾನು ಎಂದೂ ಸ್ವಾಧೀನ ಇರಲಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನನಗೆ ಯಾವುದೇ ಹಕ್ಕು ಮತ್ತು ಭಾಗ ಇಲ್ಲದೇ ಇದ್ದರೂ ಸಹ ನಾನು ಈ ಸುಳ್ಳು ದಾವೆಯನ್ನು ಹಾಕಿರುತ್ತೇನೆಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ

(ಸಾಕ್ಷಿಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ,

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್ ಸಿ ಕನಕಪುರ